ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೊಂದನೆಯ ಅಧಿವೇಶನ

ಶುಕ್ರವಾರ, ದಿನಾಂಕ: 25ನೇ ಸೆಪ್ಟಂಬರ್, 2020

ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಗೆ ಸಂಬಂಧಪಟ್ಟಂತೆ

ಶ್ರೀ ಸಿ.ಎಂ. ಇಬ್ರಾಹಿಂ (ವಿಧಾನ ಸಭೆಯಿಂದ ಚುನಾಯಿತರಾದವರು):-

632 (811) ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪ ಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಳೆದ ಸಾಲಿನಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ಯಾವ ಯಾವ ವಿಧಾನಸಭಾ ಕ್ಷೇತ್ರಗಳಿಗೆ ಎಷ್ಟು ಅನುದಾನ ನೀಡಲಾಗಿದೆ ;

(ಆ) ರಾಜ್ಯದ ಎಷ್ಟು ವಿಧಾನಸಭಾ ಕ್ಷೇತ್ರದ ಅಲ್ಪಸಂಖ್ಯಾತ ಕಾಲೋನಿಗಳನ್ನು ಅಭಿವೃದ್ಧಿಪಡಿಸಲು ಎಷ್ಟು ಬೇಡಿಕೆ ಬಂದಿದೆ; (ವಿವರ ನೀಡುವುದು)

(ಇ) ಎಷ್ಟು ಅಲ್ಪಸಂಖ್ಯಾತ ಕಾಲೋನಿಯನ್ನು ಅಭಿವೃದ್ಧಿ ಪಡಿಸಲಾಗಿದೆ; ಎಷ್ಟು ಹಣವನ್ನು ವಿನಿಯೋಗ ಮಾಡಲಾಗಿದೆ ;

(ಈ) ರಾಜ್ಯದಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಅಭಿವೃದ್ಧಿಗಾಗಿ ಸ್ಥಾಪಿಸಲಾದ ಉರ್ದು ಅಕಾಡೆಮಿಗೆ ಅಧ್ಯಕ್ಷರನ್ನು ನೇಮಿಸಲಾಗಿದೆಯೇ? (ವಿಳಂಬವಾಗಲು ಕಾರಣವೇನು)